## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದಲ್ಲಿ ವಿವಿಧ ವಸತಿ ಯೋಜನೆಗಳಡಿ ಆಯ್ಕೆಯಾಗುವ ಫಲಾನುಭವಿಗಳ ವಾರ್ಷಿಕ ಆದಾಯದ ಮಿತಿಯನ್ನು ಪರಿಷ್ಕೃತಗೊಳಿಸುವ ಬಗ್ಗೆ ಆದೇಶ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಹೆಚ್‌ಯುಡಿ 1ಹೆಚ್‌ಎಹೆಚ್ 1995(1), ದಿನಾಂಕ:4.8.1995.
2. ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮದ ಪ್ರಸ್ತಾವನೆ ಪತ್ರ ಸಂಖ್ಯೆ:ಎಂಡಿ ಆರ್‌ಜಿಆರ್‌ಹೆಚ್‌ಸಿಎಲ್ 01 ಜಿಇಎನ್ 55, 57, 58, 59, 2002, ದಿನಾಂಕ:14.7.2011, 12.9.2011, 23.9.2011, 24.11.2011.

**ಪ್ರಸ್ತಾವನೆ:**

ಓದಲಾಗಿರುವ ಸರ್ಕಾರದ ಆದೇಶ (1)ರ ದಿನಾಂಕ:4.8.1995ರಲ್ಲಿ 1995-96ನೇ ಸಾಲಿನಲ್ಲಿ ರಾಜ್ಯದ ಗ್ರಾಮೀಣ/ನಗರ ಪ್ರದೇಶಗಳಲ್ಲಿ ಮನೆ ನಿವೇಶನಗಳ ವಿತರಣೆ ಸಂಬಂಧಿಸಿದಂತೆ ಕ್ರಿಯಾ ಯೋಜನೆಗೆ ಆದೇಶ ನೀಡಲಾಗಿದೆ. ಈ ಆದೇಶದಲ್ಲಿ ವಸತಿ ರಹಿತ ಕುಟುಂಬಗಳಿಗೆ ಮನೆ ಮತ್ತು ನಿವೇಶನಗಳನ್ನು ವಿತರಣೆ ಮಾಡಲು ವಾರ್ಷಿಕ ಆದಾಯ ರೂ.11,800/-ಗಳಿಗಿಂತ ಕಡಿಮೆ ಇರುವಂತೆ ಆದಾಯ ಮಿತಿಯನ್ನು ನಿಗದಿಪಡಿಸಲಾಗಿದೆ.

ಓದಲಾಗಿರುವ (2)ರ ಪ್ರಸ್ತಾವನೆಯಲ್ಲಿ ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮವು ರಾಜ್ಯದಲ್ಲಿ ಅನುಷ್ಠಾನಗೊಳಿಸುತ್ತಿರುವ ವಿವಿಧ ವಸತಿ ಹಾಗೂ ನಿವೇಶನ ಯೋಜನೆಗಳ ಫಲಾನುಭವಿಗಳ ಆಯ್ಕೆಗೆ ಈ ಹಿಂದೆ ನಿಗದಿಪಡಿಸಿರುವ ವಾರ್ಷಿಕ ಆದಾಯ ರೂ.11,800/-ರ ಮಿತಿಯು ಈಗಿನ ವಾಸ್ತವಾಂಶಕ್ಕೆ ಕಡಿಮೆಯಾಗಿದ್ದು, ಇದನ್ನು ಹೆಚ್ಚಿಸುವ ಬಗ್ಗೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ. ಮುಂದುವರೆದು ಸದರಿ ಪ್ರಸ್ತಾವನೆಯಲ್ಲಿ ಮಹಾತ್ಮಗಾಂಧಿ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಉದ್ಯೋಗವನ್ನು ಪಡೆದ ಕುಟುಂಬದ ವಾರ್ಷಿಕ ಆದಾಯ ರೂ.12,500/- ಇದ್ದು ಕುಟುಂಬವು ಕೃಷಿ/ಕೃಷಿಯೇತರ ಚಟುವಟಿಕೆಗಳಿಂದ ಗಳಿಸುವ ಆದಾಯದ ಮೊತ್ತವು ಸೇರಿರುವಂತೆ ರೂ.20,000/-ಕ್ಕಿಂತ ಹೆಚ್ಚಾಗಿರುವುದಾಗಿ ಅಂದಾಜು ಮಾಡಿರುತ್ತಾರೆ. ಕೇಂದ್ರ ಸರ್ಕಾರದ ಪುರಸ್ಕೃತ ಯೋಜನೆಯಾದ ಇಂದಿರಾ ಆವಾಸ್ ಯೋಜನೆಯ ದಿನಾಂಕ:01.04.2004ರ ಮಾರ್ಗಸೂಚಿಗಳ (ಅಧ್ಯಾಯ-1, ಕಂಡಿಕೆ 3.4) ಪ್ರಕಾರ ಫಲಾನುಭವಿಗಳ ವಾರ್ಷಿಕ ಆದಾಯದ ಮಿತಿ ರೂ.32,000/-ಇರುವಂತೆ ರಾಜ್ಯದಲ್ಲಿ ಮನೆ/ನಿವೇಶನ ಪಡೆಯಲು ನಿಗದಿಪಡಿಸಿದ ವಾರ್ಷಿಕ ಆದಾಯವನ್ನು ಪರಿಷ್ಕರಿಸಲು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಗಿನಂತೆ ಆದೇಶ ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ:ವ ಇ 137 ಹೆಚ್‌ಎಎಂ 2011, ಬೆಂಗಳೂರು, ದಿನಾಂಕ:19.01.2012**

ಸರ್ಕಾರವು ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ರಾಜ್ಯದಲ್ಲಿ ಅನುಷ್ಠಾನಗೊಳಿಸುತ್ತಿರುವ ವಿವಿಧ ವಸತಿ ಹಾಗೂ ನಿವೇಶನ ಯೋಜನೆಗಳ ಫಲಾನುಭವಿಗಳ ಈಗಿನ ಸ್ಥಿತಿಗತಿಗೆ ಅನುಗುಣವಾಗಿ

ರಾ.ಗಾಂ.ಗ್ರಾ.ವ.ನಿ.ನಿ.
ಬೆಂಗಳೂರು.
21 JAN 2012

2ನೇ ಪುಟಕ್ಕೆ..

ವಾರ್ಷಿಕ ಆದಾಯ ಮಿತಿಯನ್ನು ಪರಿಷ್ಕರಿಸಿ ಗರಿಷ್ಠ ಮಿತಿಯನ್ನು ರೂ.32,000/-ಕ್ಕೆ (ರೂಪಾಯಿ ಮೂವತ್ತೆರಡು ಸಾವಿರಗಳು ಮಾತ್ರ) ನಿಗದಿಪಡಿಸಿ ಆದೇಶಿಸಿದೆ. ಈ ಆದೇಶವು ತಕ್ಷಣದಿಂದ ಜಾರಿಗೆ ಬರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ

(ಬಿ.ಶಂಕರಪ್ಪ) 19/1
ಪೀಠಾಧಿಕಾರಿ-2, ವಸತಿ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು. ಕಂದಾಯ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಯೋಜನಾ ಇಲಾಖೆ.
3. ಎಲ್ಲಾ ಜಿಲ್ಲಾಧಿಕಾರಿಗಳು.
4. ಎಲ್ಲಾ ವಿಭಾಗಾಧಿಕಾರಿಗಳು.
5. ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತ.
6. ~~ಎಲ್ಲ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಎಲ್ಲಾ ತಾಲ್ಲೂಕು ಪಂಚಾಯಿತಿ~~ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಎಲ್ಲಾ ತಾಲ್ಲೂಕುಗಳ ತಹಶೀಲ್ದಾರ್‌ರವರಿಗೆ ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತರವರ ಮುಖಾಂತರ.
7. ಶಾಖಾ ರಕ್ಷಾಕಡತ.